# ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

ಸಿ.ಸಿ.1271/2018

ಸಾಕ್ಷಿದಾರರ ಹೇಳಿಕೆಃ

| | | | | |
|---|---|---|---|---|
| ಹೆಸರು | : | ಮೊಹಮ್ಮದ್ ಗುಲ್‌ಶಿರ್ | CW: 3 | PW: 2 |
| ತಂದೆಯ ಹೆಸರು | : | ಮೊಹಮ್ಮದ್ ಬಕ್ಷಿ | | |
| ವಯಸ್ಸು | : | 42 | | |
| ವೃತ್ತಿ | : | ವ್ಯವಸಾಯ | | |
| ವಾಸಸ್ಥಳ | : | ಗಂಗನಕೋಟೆ | | |

ದಿನಾಂಕಃ 14.11.2025 ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಭೋಧಿಸಲಾಯಿತು.

ಮುಖ್ಯವಿಚಾರಣೆಃ – ಮಾನ್ಯ ಸ.ಸ.ಅ.ರವರಿಂದಃ–

ಆರೋಪಿ ಗೊತ್ತು. ಚಾಸಾ 2 ಗೊತ್ತು. ಈ ಪ್ರಕರಣದ ಬಗ್ಗೆ ನನಗೆ ಏನು ಗೊತ್ತಿಲ್ಲ, ನನ್ನ ಸಮಕ್ಷಮ ಯಾವುದೇ ಪಂಚನಾಮೆ ಜರುಗಿಸಿಲ್ಲ. ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ. ಪೋಲೀಸರ ಕೋರಿಕೆಯ ಮೇರೆಗೆ 2 ದಾಖಲೆಗಳಿಗೆ ನಾನು ಸಹಿಯನ್ನು ಮಾಡಿರುತ್ತೇನೆ ಆದರೆ ಅದರಲ್ಲಿ ಏನು ಬರೆದಿದೆ ಎನ್ನುವ ವಿಚಾರ ನನಗೆ ಗೊತ್ತಿಲ್ಲ. ಸಾಕ್ಷಿಯು ನಿಪಿ 3 ಮತ್ತು 4 ಛಾಯಾಚಿತ್ರಗಳಲ್ಲಿ ತಾನು ಇರುವ ಬಗ್ಗೆ ನೋಡಿ ಗುರುತಿಸಿದ್ದು ಅದನ್ನು ಯಾವ ಕಾರಣಕ್ಕೆ ತೆಗೆದಿರುತ್ತಾರೆ ಎಂದು ಗೊತ್ತಿಲ್ಲ ಎಂದು ನುಡಿಯುತ್ತಾರೆ. ಈ ಪ್ರಕರಣದ ಸಂಬಂಧ ನಾನು ಪೋಲೀಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

ಸಾಕ್ಷಿಯು ನಿಪಿ 2 ಪಂಚನಾಮೆಯಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ 2(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಕಚ್ಚಾ ನಕಾಶೆಯಲ್ಲಿ ತನ್ನ

ಸಹಿಯನ್ನು ನೋಡಿ ಗುರುತಿಸಿದ್ದು ಕಚ್ಚಾ  ನಕಾಶೆಯನ್ನು ನಿಪಿ 6 ಎಂದು, ಸಾಕ್ಷಿಯ ಸಹಿಯನ್ನು ನಿಪಿ 6(ಎ) ಎಂದು ಗುರುತಿಸಲಾಯಿತು.

(ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.)

<u>ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ-</u>

ದಿಃ 20.09.2018 ನನ್ನ ಹಾಗೂ ಚಾಸಾ 2 ರವರ ಸಮಕ್ಷಮದಲ್ಲಿ ನಿಪಿ 2 ರಂತೆ ಸಂಜೆ 6 ರಿಂದ 7 ರವರೆಗೆ ಅಮಾನತ್ತು ಪಂಚನಾಮೆ ಜರುಗಿಸಿ ಮು.ಮಾ 1 ಮತ್ತು 2 ನ್ನು ವಶಪಡಿಸಿಕೊಂಡು, ನಿಪಿ 3 ಮತ್ತು 4 ರಂತೆ ಪೋಟೋ ತೆಗೆದು, ನಿಪಿ 6 ರಂತೆ ಕಚ್ಚಾ ನಕಾಶೆಯನ್ನು ತಯಾರಿಸಿ ಸಹಿ ಪಡೆದುಕೊಂಡರು ಎಂದರೆ ಸರಿಯಲ್ಲ. ಈ ಸಂಬಂಧ ನಾನು ಪೊಲೀಸರಿಗೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಯ ಒಪ್ಪದ ಹೇಳಿಕೆಯನ್ನು ನಿಪಿ 7 ಎಂದು ಗುರುತಿಸಲಾಯಿತು.

ಎಲ್ಲಾ ವಿಚಾರಗಳು ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆಂದರೆ ಸರಿಯಲ್ಲ.

<u>ಪಾಟೀ ಸವಾಲುಃ- ಆರೋಪಿ ಪರ  ವಕೀಲರಿಂದಃ-</u>

ಆರೋಪಿ ಪರ ವಕೀಲರು ಪಾಟೀ ಸವಾಲು ಏನು  ಇಲ್ಲ ಎಂದು ತಿಳಿಸಿದ ಮೇರೆಗೆ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.